<u>**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ :: ಕೇಂದ್ರ ಕಛೇರಿ :: ಬೆಂಗಳೂರು**</u>

ಸಂಖ್ಯೆ:ಬೆಂಮಸಾಸಂ/ಕೇಕ/ನೇಮಕ/ಜಿ2/ 2963 /2012-13 ದಿನಾಂಕ: 03/ 12 /2012

**ಜಾಹೀರಾತು ಸಂಖ್ಯೆ: 03 /2012**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ನಿರ್ವಾಹಕ ಮತ್ತು ಚಾಲಕ ಹುದ್ದೆಗಳನ್ನು ಸಂಸ್ಥೆಯು ಅಳವಡಿಸಿಕೊಂಡಿರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ (ಪದವೃಂದ ಮತ್ತು ನೇಮಕಾತಿ) ನಿಯಮಾವಳಿಗಳು 1982 ಹಾಗೂ ಅದರ ತಿದ್ದುಪಡಿಗಳ ಅನುಸಾರ ನೇರ ನೇಮಕಾತಿ ಮೂಲಕ ತುಂಬಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ **(ON LINE)** ಮುಖಾಂತರ ಆಹ್ವಾನಿಸಲಾಗಿದೆ. ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು ನೇಮಕಾತಿ ಸಮಯದಲ್ಲಿ ಮಾರ್ಪಡಿಸಬಹುದಾಗಿರುತ್ತದೆ. ಹುದ್ದೆಗಳ ಮೀಸಲಾತಿ ವರ್ಗೀಕರಣ ಈ ಕೆಳಕಂಡಂತಿರುತ್ತದೆ.

**ಹುದ್ದೆ: ನಿರ್ವಾಹಕ-ದರ್ಜೆ-3(ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಗೆ ಮೀಸಲಿರುವ ಹುದ್ದೆಗಳು)**

| ಮೀಸಲಾತಿ | ಹುದ್ದೆಗಳ ವರ್ಗೀಕರಣ | | | | | | | | |
|---|---|---|---|---|---|---|---|---|---|
| | ಪ.ಜಾ | ಪ.ಪಂ | ವ-1 | 2ಎ | 2ಬಿ | 3ಎ | 3ಬಿ | ಸಾ.ವ | ಒಟ್ಟು |
| ಸಾಮಾನ್ಯ | 21 | 05 | 06 | 21 | 06 | 06 | 06 | 67 | 138 |
| ಮಹಿಳಾ ಮೀಸಲು | 25 | 05 | 06 | 25 | 06 | 07 | 08 | 82 | 164 |
| ಗ್ರಾಮೀಣ ಮೀಸಲು | 20 | 04 | 05 | 21 | 06 | 05 | 08 | 69 | 138 |
| ಕನ್ನಡ ಮಾಧ್ಯಮ | 04 | - | 01 | 04 | 01 | 01 | 02 | 14 | 27 |
| ಯೋಜನಾ ನಿರಾಶ್ರಿತರು | 04 | - | 01 | 04 | 01 | 01 | 01 | 14 | 26 |
| ಮಾಜಿ ಸೈನಿಕರು | 08 | 02 | 02 | 08 | 02 | 02 | 03 | 27 | 54 |
| ಒಟ್ಟು | 82 | 16 | 21 | 83 | 22 | 22 | 28 | 273 | 547 |

ಹುದ್ದೆ: ನಿರ್ವಾಹಕ-ದರ್ಜೆ-3 (ಜೆ.ಓ.ಸಿ ವಿದ್ಯಾರ್ಹತೆಗೆ ಮೀಸಲಿರುವ ಹುದ್ದೆಗಳು)

| ಮೀಸಲಾತಿ | ಪ.ಜಾ | ಪ.ಪಂ | ವ-1 | 2ಎ | 2ಬಿ | 3ಎ | 3ಬಿ | ಸಾ.ವ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 10 | 02 | 03 | 10 | 03 | 03 | 04 | 34 | 69 |
| ಮಹಿಳಾ ಮೀಸಲು | 12 | 03 | 04 | 12 | 03 | 03 | 04 | 41 | 82 |
| ಗ್ರಾಮೀಣ ಮೀಸಲು | 10 | 02 | 02 | 10 | 02 | 02 | 03 | 34 | 65 |
| ಕನ್ನಡ ಮಾಧ್ಯಮ | 02 | 01 | - | 02 | 01 | 01 | - | 07 | 14 |
| ಯೋಜನಾ ನಿರಾಶ್ರಿತರು | 02 | 01 | 01 | 02 | 01 | 01 | 01 | 07 | 16 |
| ಮಾಜಿ ಸೈನಿಕರು | 04 | - | 01 | 04 | 01 | 01 | 02 | 14 | 27 |
| ಒಟ್ಟು | 40 | 9 | 11 | 40 | 11 | 11 | 14 | 137 | 273 |

**ಹುದ್ದೆ:ಚಾಲಕ-ದರ್ಜೆ-3**

| ಮೀಸಲಾತಿ | ಪ.ಜಾ | ಪ.ಪಂ | ವ-1 | 2ಎ | 2ಬಿ | 3ಎ | 3ಬಿ | ಸಾ.ವ | ಒಟ್ಟು |
|---|---|---|---|---|---|---|---|---|---|
| ಸಾಮಾನ್ಯ | 31 | 08 | 08 | 31 | 08 | 08 | 10 | 101 | 205 |
| ಮಹಿಳಾ ಮೀಸಲು | 37 | 07 | 12 | 37 | 10 | 09 | 13 | 123 | 248 |
| ಗ್ರಾಮೀಣ ಮೀಸಲು | 30 | 07 | 05 | 31 | 07 | 07 | 10 | 102 | 199 |
| ಕನ್ನಡ ಮಾಧ್ಯಮ | 06 | 01 | 02 | 06 | 02 | 02 | 02 | 21 | 42 |
| ಯೋಜನಾ ನಿರಾಶ್ರಿತರು | 06 | 01 | 02 | 06 | 02 | 02 | 02 | 20 | 41 |
| ಮಾಜಿ ಸೈನಿಕರು | 12 | 01 | 04 | 12 | 04 | 04 | 04 | 41 | 82 |
| ಒಟ್ಟು | 122 | 25 | 33 | 123 | 33 | 32 | 41 | 408 | 817 |

**ಟಿಪ್ಪಣಿ: ಸಮತಲ ಮೀಸಲು** ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಸಾಮಾನ್ಯ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಅರ್ಹತೆಗಳು: (ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕ:12/01/2013 ರಂತೆ)**

## I. ಶೈಕ್ಷಣಿಕ ವಿದ್ಯಾರ್ಹತೆ :

**1) ನಿರ್ವಾಹಕ (ಪಿ.ಯು.ಸಿ. ಅಥವಾ ತತ್ಸಮಾನ) ಹುದ್ದೆಗೆ:**

**ಅ) ಪಿ.ಯು.ಸಿ ಅಥವಾ ತತ್ಸಮಾನ ವಿದ್ಯಾರ್ಹತೆಯಲ್ಲಿ ಉತ್ತೀರ್ಣರಾಗಿರಬೇಕು**

**ಆ) ಅರ್ಜಿ ಸಲ್ಲಿಸಲು ನಿಗಧಿಪಡಿಸಲಾದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ನಿರ್ವಾಹಕರ ಪರವಾನಗಿ ಮತ್ತು ಬ್ಯಾಡ್ಜ್ ಹೊಂದಿರಬೇಕು**

**2) ನಿರ್ವಾಹಕ (ಜೆ.ಓ.ಸಿ ವಿದ್ಯಾರ್ಹತೆ) ಹುದ್ದೆಗೆ:**

**ಅ) ಜೆ.ಓ.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು**

**ಆ) ಅರ್ಜಿ ಸಲ್ಲಿಸಲು ನಿಗಧಿಪಡಿಸಲಾದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ನಿರ್ವಾಹಕರ ಪರವಾನಗಿ ಮತ್ತು ಬ್ಯಾಡ್ಜ್ ಹೊಂದಿರಬೇಕು**

**3) ಚಾಲಕ ಹುದ್ದೆಗೆ:**

ಅ) ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯಲ್ಲಿ ತೇರ್ಗಡೆಯಾಗಿರಬೇಕು(ಮುಕ್ತ ವಿದ್ಯಾಲಯದಿಂದ ಪಡೆದ 500 ಅಂಕಗಳ ಎಸ್.ಎಸ್.ಎಲ್.ಸಿ. ವಿದ್ಯಾರ್ಹತೆಯ ಅಂಕಪಟ್ಟಿಯನ್ನು ಪರಿಗಣಿಸಲಾಗುವುದಿಲ್ಲ).

ಆ) ನಿಗಧಿತ ದೇಹ ದಾರ್ಢ್ಯತೆ ಹೊಂದಿರಬೇಕು.

ಇ) HPV / HTV ಅಥವಾ HGV ಚಾಲನಾ ಪರವಾನಗಿಯನ್ನು ಹೊಂದಿ ಕನಿಷ್ಠ ಎರಡು ವರ್ಷಗಳಾಗಿರಬೇಕು. ಪರವಾನಗಿ ಚಾಲ್ತಿಯಲ್ಲಿರಬೇಕು ಮತ್ತು ಕರ್ನಾಟಕ ಬ್ಯಾಡ್ಜ್ ಹೊಂದಿರಬೇಕು

## II. ವಯೋಮಿತಿ :

1) ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ 12/01/2013 ರಂದು ಈ ಕೆಳಕಂಡ ವಯೋಮಿತಿಯನ್ನು ಮೀರಿರಬಾರದು.

| ವರ್ಗ | ನಿರ್ವಾಹಕ ಹುದ್ದೆಗೆ | | ಚಾಲಕ ಹುದ್ದೆಗೆ | |
|---|---|---|---|---|
| | ಕನಿಷ್ಠ | ಗರಿಷ್ಠ | ಕನಿಷ್ಠ | ಗರಿಷ್ಠ |
| **ಸಾಮಾನ್ಯ ವರ್ಗ** | 18 | 35ವರ್ಷಗಳು | 24 | 35ವರ್ಷಗಳು |
| **2ಎ/2ಬಿ/3ಎ/3ಬಿ** | 18 | 38 ವರ್ಷಗಳು | 24 | 38 ವರ್ಷಗಳು |
| **ಪ.ಜಾತಿ/ಪ.ಪಂ/ ವರ್ಗ–1** | 18 | 40 ವರ್ಷಗಳು | 24 | 40 ವರ್ಷಗಳು |

2) ಇಲಾಖಾ ಅಭ್ಯರ್ಥಿಗಳು ಅವರು ಸಲ್ಲಿಸಿದ ಪ್ರತಿ ಪೂರ್ಣಗೊಂಡ ಸೇವಾವಧಿಗೆ ಒಂದು ವರ್ಷದಂತೆ ಸೇವಾವಧಿಯ ಗರಿಷ್ಟ 10 ವರ್ಷಗಳಿಗೆ ಮೀರದಂತೆ ವಯೋಮಿತಿ ರಿಯಾಯಿತಿಗೆ ಅರ್ಹರು, ಆದರೆ ಅವರ ವಯಸ್ಸು 45 ವರ್ಷ ಮೀರಿರಬಾರದು.

3) ಮಾಜಿ ಸೈನಿಕ ಅಭ್ಯರ್ಥಿಯು ಭಾರತದ ಸಶಸ್ತ್ರ ಪಡೆಯಲ್ಲಿ ಕನಿಷ್ಠ 15 ವರ್ಷಗಳ ಸೇವೆ ಸಲ್ಲಿಸಿರಬೇಕು ಮತ್ತು ಅವರು ಸಲ್ಲಿಸಿದ ಸೇವೆಯ ಜೊತೆಗೆ 3 ವರ್ಷಗಳ ವಯೋಮಿತಿಯ ರಿಯಾಯಿತಿಗೆ ಅರ್ಹರು, ಆದರೆ ಅವರ ವಯಸ್ಸು 45 ವರ್ಷ ಮೀರಿರಬಾರದು.

## III. ದೇಹದಾರ್ಢ್ಯತೆ:

ಅಭ್ಯರ್ಥಿಗಳು ಈ ಕೆಳಕಂಡ ಕನಿಷ್ಟ ದೇಹದಾರ್ಢ್ಯತೆ ಹೊಂದಿರಬೇಕು.

| | **ನಿರ್ವಾಹಕ ಹುದ್ದೆಗೆ** | | **ಚಾಲಕ ಹುದ್ದೆಗೆ** | |
|---|---|---|---|---|
| | **ಪುರುಷರು** | **ಮಹಿಳೆಯರು** | **ಪುರುಷರು** | **ಮಹಿಳೆಯರು** |
| ಎತ್ತರ | 160 ಸೆಂ ಮೀ | 150 ಸೆ.ಮೀ | 163 ಸೆಂ ಮೀ | 153 ಸೆ.ಮೀ |
| ತೂಕ | - | - | 55 ಕೆ.ಜಿ | 50 ಕೆ.ಜಿ |

## IV. ಜಾತಿ/ವರ್ಗ ಮೀಸಲಾತಿ:

**ಮೀಸಲಾತಿ ಕೋರಬಯಸುವ ಅಭ್ಯರ್ಥಿಗಳು:**

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ–ಡಿ ರಲ್ಲಿ,

ಆ) ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳು ನಮೂನೆ–ಇ ರಲ್ಲಿ,

ಇ) ಪ್ರವರ್ಗ–2ಎ, 2ಬಿ, 3ಎ, ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ನಮೂನೆ–ಎಫ್ ರಲ್ಲಿ ಚಾಲ್ತಿಯಲ್ಲಿರುವ ಹಾಗೂ ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿರುವ ಕೊನೆಯ ದಿನಾಂಕ 12/01/2013 ರೊಳಗಾಗಿ ಪಡೆದಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಹೊಂದಿದ್ದಲ್ಲಿ ಮಾತ್ರ ಆಯಾ ಗುಂಪಿನ ಮೀಸಲಾತಿ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

ಈ)ಪರಿವಾರ, ತಳವಾರ, ಮಾಲೇರು, ಕುರುಬ, ಬೆಸ್ತ ಮತ್ತು ಕೋಳಿ ಜಾತಿಗೆ ಸೇರಿದ ಅಭ್ಯರ್ಥಿಗಳು ಪರಿಶಿಷ್ಠ ಪಂಗಡದ ನಾಯಕ, ಮಲೇರು, ಕಾಡು ಕುರುಬ, ಜೇನು ಕುರುಬ, ಗೊಂಡ, ರಾಜ್‌ಗೊಂಡ, ಕೋಳಿದೋರ ಮತ್ತು ಟೋಕ್ರಿ ಕೋಳಿ ಎಂದು ಜಾತಿ ಪ್ರಮಾಣ ಪತ್ರ ಪಡೆದಿದ್ದಲ್ಲಿ ಅವುಗಳು ಅಸಿಂಧು ಆಗುತ್ತವೆ. ಆದುದರಿಂದ, ಪರಿಶಿಷ್ಠ ಪಂಗಡದ ನಾಯಕ, ಮಾಲೇರು, ಕಾಡು ಕುರುಬ, ಜೇನು ಕುರುಬ, ಗೊಂಡ, ರಾಜ್‌ಗೊಂಡ, ಕೋಳಿದೋರ ಮತ್ತು ಟೋಕ್ರಿ ಕೋಳಿ ಜಾತಿಗೆ ಸೇರಿದ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: **ಎಸ್‌ಡಬ್ಲೂಡಿ /713/ಎಸ್‌ಎಡಿ/93** ದಿನಾಂಕ:11/03/2002 ರನ್ವಯ ದಿನಾಂಕ:11/03/2002ರ ನಂತರ ಹಾಗೂ ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕದೊಳಗೆ ಪಡೆದ ಜಾತಿ ಪ್ರಮಾಣ ಪತ್ರವನ್ನು ಹೊಂದಿರಬೇಕು.

## V. ಗ್ರಾಮೀಣ ಮೀಸಲಾತಿ:

ಅ) ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ:08:ಸೆನೆನಿ:2001, ದಿನಾಂಕ:13/02/2001 ರಂತೆ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಾವಳಿಗಳನ್ವಯ 1ನೇ ತರಗತಿಯಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಪ್ರಮಾಣ ಪತ್ರವನ್ನು ನಮೂನೆ–2 ರಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರದ ಮೇಲೆ ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಯ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರ ಸಲ್ಲಿಸಿ ದಲ್ಲಿ ಮಾತ್ರ ಗ್ರಾಮೀಣ ಮೀಸಲಾತಿಗೆ ಅರ್ಹರಾಗುವರು.

ಆ) ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ನಮೂನೆ–2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ–1 ರಲ್ಲಿ ಸಂಬಂಧಪಟ್ಟ ತಹಶೀಲ್ದಾರರಿಂದ ಪಡೆದ ಪ್ರಮಾಣ ಪತ್ರ ಹೊಂದಿರಬೇಕು. (ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

## VI. ಕನ್ನಡ ಮಾಧ್ಯಮ ಮೀಸಲಾತಿ :

ಅಭ್ಯರ್ಥಿಯು 1ನೇ ತರಗತಿಯಿಂದ 10ನೇ ತರಗತಿಯವರೆಗಿನ ಎಲ್ಲಾ ತರಗತಿಗಳನ್ನು ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಸಿಆಸುಇ/**71** /ಸೆನೆನಿ/ **2001**, ದಿನಾಂಕ:24/10/2002 ರನ್ವಯ ನಿಗಧಿತ ನಮೂನೆಯಲ್ಲಿ ಸಂಬಂಧಪಟ್ಟ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಹಾಗೂ ಮೊಹರು ಪಡೆದ ಪ್ರಮಾಣ ಪತ್ರ ಹೊಂದಿದ್ದಲ್ಲಿ ಮಾತ್ರ ಕನ್ನಡ ಮಾಧ್ಯಮ ಮೀಸಲಾತಿಗೆ ಅರ್ಹರಿರುತ್ತಾರೆ.

## VII. ಯೋಜನಾ ನಿರಾಶ್ರಿತರು :

ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ **/23**/ಸೆನೆನಿ/**99**, ದಿನಾಂಕ:23/11/2000 ರಲ್ಲಿ ಸೂಚಿಸಿರುವಂತೆ ಯೋಜನಾ ನಿರಾಶ್ರಿತರ ಮೀಸಲಾತಿಗೆ ಅರ್ಹ ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಅಧಿಕೃತ ಪ್ರಾಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರದಲ್ಲಿ ಯಾವುದಾದರೂ ಒಂದು ಐಟಂ ಸಂಪೂರ್ಣವಾಗಿ ಅನ್ವಯಿಸಿದಲ್ಲಿ ಮತ್ತು ಸದರಿ ನಮೂನೆಯನ್ನು ಸಮರ್ಪಕವಾಗಿ ಹಾಗೂ ಸಂಪೂರ್ಣವಾಗಿ ಭರ್ತಿ ಮಾಡಿದ ಪಕ್ಷದಲ್ಲಿ ಮಾತ್ರ ಯೋಜನಾ ನಿರಾಶ್ರಿತರ ಮೀಸಲಾತಿಗೆ ಅರ್ಹರಿರುತ್ತಾರೆ.(ಯೋಜನಾ ನಿರಾಶ್ರಿತರ ಮೀಸಲಾತಿ ಪ್ರಮಾಣ ಪತ್ರ ಜಾರಿ ಮಾಡಿದ ದಿನಾಂಕವನ್ನು ತಪ್ಪದೇ ಅರ್ಜಿಯ ಅಂಕಣದಲ್ಲಿ ನಮೂದಿಸತಕ್ಕದ್ದು).

## VIII. ಮಾಜಿ ಸೈನಿಕ ಮೀಸಲಾತಿ:

ಮಾಜಿ ಸೈನಿಕ ಅಭ್ಯರ್ಥಿಯು ಭಾರತದ ಸಶಸ್ತ್ರ ಪಡೆಯಲ್ಲಿ ಕನಿಷ್ಠ 15 ವರ್ಷಗಳ ಸೇವೆ ಸಲ್ಲಿಸಿರುವ ಬಗ್ಗೆ ನಿಗಧಿತ ಡಿಸ್‌ಜಾರ್ಜ್ ಪುಸ್ತಕ ಹೊಂದಿರಬೇಕು.

## IX. ನಿಗಧಿತ ಶುಲ್ಕ:

**ಶುಲ್ಕ ಪಾವತಿ ಮಾಡುವ ರೀತಿ ಹಾಗೂ ಬ್ಯಾಂಕಿನ ವಿವರ:**

ಅಭ್ಯರ್ಥಿಗಳು www.bmtccareers.com ವೆಬ್ ಸೈಟ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಅರ್ಜಿಯ ಪ್ರತಿಯನ್ನು ಮುದ್ರಿಸಿಕೊಳ್ಳುವುದರ ಜೊತೆಗೆನ ಬ್ಯಾಂಕ್ ಚಲನ್ ಪ್ರತಿಯನ್ನು ಕಡ್ಡಾಯವಾಗಿ ಮುದ್ರಿಸಿಕೊಳ್ಳಬೇಕಾಗುತ್ತದೆ. ಈ ರೀತಿಯಲ್ಲಿ ಮುದ್ರಿತವಾದ ಬ್ಯಾಂಕ್ ಚಲನ್‌ನ 4 ಪ್ರತಿಗಳಲ್ಲಿಯೂ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿದ ವಿವರಗಳ ಅನುಸಾರ ಸಂಬಂಧಿಸಿದ ಮಾಹಿತಿಗಳು ಸ್ವಯಂ ಮುದ್ರಿತವಾಗಿರುತ್ತದೆ. ಅಭ್ಯರ್ಥಿಯು ಮುದ್ರಿತ 4 ಚಲನ್‌ಗಳ ಮೇಲೆ ತನ್ನ ಸಹಿಯನ್ನು ದಾಖಲಿಸಿ, ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ, ವರ್ಗ–1 ಹಾಗೂ ಮಾಜಿ ಸೈನಿಕರು ಮತ್ತು ಮಾಜಿ ಸೈನಿಕರ ಅವಲಂಬಿತರು ರೂ.150–00 ಹಾಗೂ ವರ್ಗ–2ಎ, 2ಬಿ, 3ಎ, 3ಬಿ ಮತ್ತು ಸಾಮಾನ್ಯ ವರ್ಗದ ಅಭ್ಯರ್ಥಿಗಳು ರೂ. 300–00 ಅರ್ಜಿ ಶುಲ್ಕವನ್ನು (ಬ್ಯಾಂಕ್ ಶುಲ್ಕ ಹೊರತುಪಡಿಸಿ) ಕರ್ನಾಟಕ ರಾಜ್ಯದಲ್ಲಿನ ಯಾವುದಾದರೂ "ಸ್ಟೇಟ್ ಬ್ಯಾಂಕ್ ಆಫ್ ಮೈಸೂರು" (State Bank of Mysore) ಶಾಖೆಯಲ್ಲಿ ಪಾವತಿಸಬೇಕು. ಬ್ಯಾಂಕ್ ದೃಢೀಕರಿಸಿದ ಪ್ರತಿಗಳಲ್ಲಿ 2 ಪ್ರತಿಗಳನ್ನು ಬ್ಯಾಂಕಿನಲ್ಲಿ ಹಾಗೂ ಇನ್ನುಳಿದ 2 ಪ್ರತಿಗಳನ್ನು ಅಭ್ಯರ್ಥಿಯು ತನ್ನ ಬಳಿ ಕಾಯ್ದಿರಿಸಿಕೊಳ್ಳುವುದು. ಅದರಲ್ಲಿ ಸಂಸ್ಥೆಯ ಪ್ರತಿಯನ್ನು ಮೂಲ ದಾಖಲಾತಿಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸುವುದು.

ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಸಂಸ್ಥೆಯು ನಡೆಸುವ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

***ಚಾಲಕ ಮತ್ತು ನಿರ್ವಾಹಕ ಎರಡೂ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪ್ರತ್ಯೇಕ ಅರ್ಜಿ*** **ಸಲ್ಲಿಸಬೇಕು.**

## X. ಅರ್ಜಿಯನ್ನು ಸಲ್ಲಿಸುವ ವಿಧಾನ ಮತ್ತು ಕೊನೆಯ ದಿನಾಂಕ:

1. ಅರ್ಜಿಯನ್ನು ಕಡ್ಡಾಯವಾಗಿ ಆನ್‌ಲೈನ್ ಮುಖಾಂತರವೇ ಬೆಮಸಾಸಂಸ್ಥೆಯ ವೆಬ್‌ಸೈಟ್ www.bmtccareers.com ಮೂಲಕ ಸಲ್ಲಿಸಬೇಕು
2. **ದಿನಾಂಕ: 10/12/2012 ರಿಂದ 12/01/2013 ರವರೆಗೆ ವೆಬ್‌ಸೈಟ್ ತೆರೆದಿರುತ್ತದೆ**. ಭರ್ತಿ ಮಾಡಿದ ಅರ್ಜಿಗಳನ್ನು ದಿನಾಂಕ **12/01/2013** ರ ಸಂಜೆ 05.30 ಗಂಟೆಯೊಳಗೆ ಆನ್‌ಲೈನ್‌ನಲ್ಲಿ ಸಲ್ಲಿಸಬಹುದಾಗಿರುತ್ತದೆ.
3. ನಿಗಧಿತ ಕೊನೆಯ ದಿನಾಂಕ ಮತ್ತು ಸಮಯದ ನಂತರ ಬರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

4. ಅಭ್ಯರ್ಥಿಗಳು ಕೇವಲ ಒಂದು ಬಾರಿ ಮಾತ್ರ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು, ಒಮ್ಮೆ ಸಲ್ಲಿಸಿದ ಅರ್ಜಿಯನ್ನು ಯಾವುದೇ ಕಾರಣದಿಂದಲೂ ತಿದ್ದುಪಡಿ ಮಾಡಲು ಅವಕಾಶವಿರುವುದಿಲ್ಲ.
5. ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ ತಕ್ಷಣ ಅರ್ಜಿಯಲ್ಲಿ ನಮೂದಿಸಿದ ವಿವರಗಳ ಆಧಾರದ ಮೇಲೆ ನೀಡುವ ನೋಂದಣಿ ಸಂಖ್ಯೆ, ಅರ್ಜಿಯ ಡೌನ್‌ಲೋಡ್ ಪ್ರತಿಯನ್ನು ಮುದ್ರಿಸಿಕೊಂಡು ತಮ್ಮೊಂದಿಗೆ ತಪ್ಪದೇ ಇಟ್ಟುಕೊಳ್ಳುವುದು ಹಾಗೂ ಪರಿಶೀಲನಾ ಸಮಯದಲ್ಲಿ ಇವುಗಳನ್ನು ಹಾಜರುಪಡಿಸುವುದು.

## XI. ಆಯ್ಕೆ ವಿಧಾನ: ನಿರ್ವಾಹಕ ಹುದ್ದೆಗೆ

ಅಭ್ಯರ್ಥಿಗಳು ಹುದ್ದೆಗೆ ನಿಗಧಿಪಡಿಸಲಾದ ವಿದ್ಯಾರ್ಹತೆಯಲ್ಲಿ ಗಳಿಸಿದ ಶೇಕಡವಾರು ಅಂಕಗಳು ಮತ್ತು ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳ ಆಧಾರದ ಮೇಲೆ 1:5 ರ ಅನುಪಾತದಲ್ಲಿ ಅಭ್ಯರ್ಥಿಗಳನ್ನು ಮೂಲ ದಾಖಲಾತಿಗಳ ಪರಿಶೀಲನೆಗೆ ಆಹ್ವಾನಿಸಲಾಗುವುದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿಯನ್ನು **ದಿನಾಂಕ: 21.01.2013 ರಂದು ಸಂಸ್ಥೆಯ ವೆಬ್‌ಸೈಟ್ www.bmtccareers.com ಮತ್ತು ಸಂಸ್ಥೆಯ ಸೂಚನಾ ಫಲಕದಲ್ಲಿ ಹಾಗೂ ಶೇಕಡಾವಾರು ಅಂಕಗಳ ಪಟ್ಟಿಯನ್ನು ಪ್ರಮುಖ ಕನ್ನಡ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದು. 1:5 ರ ಅರ್ಹತಾ ಪಟ್ಟಿಯಲ್ಲಿ ಸೇರ್ಪಡೆಗೊಂಡ ಅರ್ಹ ಅಭ್ಯರ್ಥಿಗಳು ಕರೆಪತ್ರವನ್ನು ವೆಬ್‌ಸೈಟ್‌ನಿಂದ ಮುದ್ರಿಸಿಕೊಂಡು ದಿನಾಂಕ: 28/01/2013ರಿಂದ 08/02/2013 ರವರೆಗೆ ಕರೆಪತ್ರದಲ್ಲಿ ಸೂಚಿಸಲಾದ ದಿನಾಂಕ ಮತ್ತು ಸಮಯಕ್ಕೆ ಸರಿಯಾಗಿ ಮೂಲ ದಾಖಲಾತಿಗಳ ಮತ್ತು ದೇಹ ದಾರ್ಢ್ಯತೆ ಪರಿಶೀಲನೆಗೆ ಹಾಜರಾಗುವುದು. ಅರ್ಹತಾ ಪಟ್ಟಿಯಲ್ಲಿ ಸೇರ್ಪಡೆಗೊಂಡ ಅಭ್ಯರ್ಥಿಗಳಿಗೆ ಮೂಲ ದಾಖಲಾತಿಗಳ ಮತ್ತು ದೇಹದಾರ್ಢ್ಯತೆ ಪರಿಶೀಲನೆಗೆ ಅಂಚೆಯ ಮೂಲಕ ಪ್ರತ್ಯೇಕ ಕರೆಪತ್ರಗಳನ್ನು ಕಳುಹಿಸಲಾಗುವುದಿಲ್ಲ.**

ಮೂಲ ದಾಖಲಾತಿಗಳ ಮತ್ತು ದೇಹದಾರ್ಢ್ಯತೆ ಪರಿಶೀಲನೆಯಲ್ಲಿ ಅರ್ಹರಾದ ಅಭ್ಯರ್ಥಿಗಳನ್ನು ಹುದ್ದೆಗೆ ನಿಗಧಿಪಡಿಸಲಾಗಿರುವ ವಿದ್ಯಾರ್ಹತೆಯಲ್ಲಿ ಪಡೆದ ಒಟ್ಟು ಶೇಕಡಾವಾರು ಅಂಕಗಳ ಆಧಾರದ ಮೇಲೆ ಮತ್ತು ಜಾರಿಯಲ್ಲಿರುವ ಮೀಸಲಾತಿ ನಿಯಮಾನುಸಾರ ಆಯ್ಕೆ ಮಾಡಲಾಗುವುದು. ಯಾವುದೇ ಸಂದರ್ಶನವನ್ನು ನಡೆಸಲಾಗುವುದಿಲ್ಲ.

## XII. ಆಯ್ಕೆ ವಿಧಾನ: ಚಾಲಕ ಹುದ್ದೆಗೆ:

ಅಭ್ಯರ್ಥಿಗಳು ಆನ್ ಲೈನ್ (On Line) ಮೂಲಕ ಅರ್ಜಿ ಸಲ್ಲಿಸಿದ ನಂತರ ಅರ್ಜಿಯಲ್ಲಿ ನಮೂದಿಸಿದ ವಿವರಗಳ ಆಧಾರದ ಮೇಲೆ ಅರ್ಜಿ ಸಲ್ಲಿಸಿದ ತಕ್ಷಣ ದೊರಕುವ ನೋಂದಣಿ ಸಂಖ್ಯೆಯನ್ನು ನಮೂದಿಸಿ ಮೂಲದಾಖಲಾತಿಗಳ ಪರಿಶೀಲನೆಗೆ ಹಾಜರಾಗಲು ಕರೆಪತ್ರವನ್ನು ಮುದ್ರಿಸಿಕೊಳ್ಳಬಹುದಾಗಿರುತ್ತದೆ. ಈ ಕರೆಪತ್ರದಲ್ಲಿ ಅಭ್ಯರ್ಥಿಗಳು ಮೂಲದಾಖಲಾತಿಗಳ ಪರಿಶೀಲನೆಗೆ ಹಾಜರಾಗಬೇಕಾದ ದಿನಾಂಕ, ಸ್ಥಳ ಹಾಗೂ ಯಾವ ದಾಖಲಾತಿಗಳನ್ನು ಪರಿಶೀಲನೆಗೆ ಸಲ್ಲಿಸಬೇಕೆಂಬ ಮಾಹಿತಿಯು ಲಭ್ಯವಿರುತ್ತದೆ. ದಿನಾಂಕ 13/02/2013ರಿಂದ ಚಾಲನಾ ವೃತ್ತಿ ಪರೀಕ್ಷೆಯನ್ನು ನಡೆಸಲು ಯೋಜಿಸಲಾಗಿದ್ದು, ದಿನಾಂಕ 01/02/2013ರಿಂದ ಕರೆಪತ್ರಗಳನ್ನು ಮುದ್ರಿಸಿಕೊಂಡು ಸೂಚಿಸಲಾದ ದಿನಾಂಕದಂದು ಮೂಲದಾಖಲಾತಿಗಳ ಪರಿಶೀಲನೆಗೆ ತಪ್ಪದೇ ಹಾಜರಾಗುವುದು.

ಅರ್ಹ ಅಭ್ಯರ್ಥಿಗಳಿಗೆ ಸಂಸ್ಥೆಯ ವತಿಯಿಂದ ಚಾಲನಾ ಸಾಮರ್ಥ್ಯದ ಬಗ್ಗೆ ಗಣಕೀಕೃತ ಟ್ರ್ಯಾಕ್‌ನಲ್ಲಿ ನಡೆಸುವ ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇರೆಗೆ ಮತ್ತು ಜಾರಿಯಲ್ಲಿರುವ ಮೀಸಲಾತಿ ನಿಯಮಾನುಸಾರ ಆಯ್ಕೆ ಮಾಡಲಾಗುವುದು.

## XIII. ತರಬೇತಿ ಅವಧಿ ಮತ್ತು ಭತ್ಯೆ:

ಅರ್ಹ ಅಭ್ಯರ್ಥಿಗಳು ಮೇಲ್ಕಾಣಿಸಿದ ಹುದ್ದೆಗಳಿಗೆ ಆಯ್ಕೆಗೊಂಡಲ್ಲಿ ಎರಡು ವರ್ಷಗಳ ಕಾಲ ಕೆಲಸದ ಮೇಲೆ ತರಬೇತಿಗೆ ನಿಯೋಜಿಸಲಾಗುವುದು ತರಬೇತಿ ಅವಧಿಯಲ್ಲಿ ಈ ಕೆಳಕಂಡಂತೆ ಮಾಸಿಕ ತರಬೇತಿ ಭತ್ಯೆಯನ್ನು ನೀಡಲಾಗುವುದು.

| ಹುದ್ದೆ | ಮಾಸಿಕ ಸ್ಟೈಫಂಡ್ |
|---|---|
| ನಿರ್ವಾಹಕ | 6000 |
| ಚಾಲಕ | 6500 |

ಬೆಂಗಳೂರು ಕೇಂದ್ರ ಸ್ಥಾನದಲ್ಲಿ ಕಾರ್ಯ ನಿರ್ವಹಿಸುವುದರಿಂದ *ಮೇಲ್ಕಾಣಿಸಿದ ಮಾಸಿಕ ತರಬೇತಿ ಭತ್ಯೆಯ ಜೊತೆಗೆ ತಿಂಗಳಲ್ಲಿ ಕನಿಷ್ಠ 20 ದಿನಗಳು ವಾಸ್ತವಿಕ ಹಾಜರಾತಿ ಇದ್ದಲ್ಲಿ* ರೂ. 500/–ನ್ನು ಪರಿಶ್ರಮ ಭತ್ಯೆಯನ್ನಾಗಿ ನೀಡಲಾಗುವುದು

## XIV. ವೇತನ ಶ್ರೇಣಿ: ಆಯ್ಕೆಗೊಂಡ ಅಭ್ಯರ್ಥಿಗಳು ಎರಡು ವರ್ಷಗಳ ಕೆಲಸದ ಮೇಲೆ ತರಬೇತಿ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿದವರನ್ನು ಖಾಯಂಪೂರ್ವ ಪರೀಕ್ಷಣಾರ್ಥಿ ಸೇವೆಯಲ್ಲಿ ನೇಮಕಗೊಳಿಸಿ ಈ ಕೆಳಕಂಡ ವೇತನ ಶ್ರೇಣಿಯನ್ನು ನಿಗಧಿಪಡಿಸಲಾಗುವುದು.

| | |
|---|---|
| ನಿರ್ವಾಹಕ | 5850-70-5990-90-6350-130-7130-170-7980 |
| ಚಾಲಕ | 6230–90–6410–130–7190–170–8040–220–8480–280–9320–340–10000 |

## XV. ವಿಶೇಷ ಸೂಚನೆಗಳು:

ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವಂತೆ ಈ ಕೆಳಕಂಡ ಮೂಲ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಲಾಗಿರುವ ಕೊನೆಯ ದಿನಾಂಕದೊಳಗೆ ಹೊಂದಿರಬೇಕು ಹಾಗೂ ಸಂಸ್ಥೆಯು ಮೂಲ ದಾಖಲಾತಿಗಳನ್ನು ಪರಿಶೀಲನೆಗೆ ಸೂಚಿಸಿದಾಗ ತಪ್ಪದೇ ಹಾಜರುಪಡಿಸತಕ್ಕದ್ದು.

1) ಅರ್ಜಿ ಶುಲ್ಕದ ಬ್ಯಾಂಕ್ ಚಲನ್‌ನ ಪ್ರತಿ.
2) ಪಿಯುಸಿ ಅಥವಾ ತತ್ಸಮಾನ/ ಜೆಓಸಿ ವಿದ್ಯಾರ್ಹತೆಯ ಅಂಕಪಟ್ಟಿ.(ನಿರ್ವಾಹಕಹುದ್ದೆಗೆ).
3) ನಿರ್ವಾಹಕರ ಲೈಸೆನ್ಸ್ ಮತ್ತು ಬ್ಯಾಡ್ಜ್( ನಿರ್ವಾಹಕ ಹುದ್ದೆಗೆ).
4) ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಯ ಅಂಕಪಟ್ಟಿ( ಚಾಲಕ ಹುದ್ದೆಗೆ).
5) ಚಾಲ್ತಿಯಲ್ಲಿರುವ ಸರಕು ಸಾಗಾಣಿಕೆ/ಪ್ರಯಾಣಿಕರ ಭಾರಿ ವಾಹನ ಚಾಲನಾ ಪರವಾನಗಿ ಮತ್ತು ಕರ್ನಾಟಕ ಬ್ಯಾಡ್ಜ್( ಚಾಲಕ ಹುದ್ದೆಗೆ ).
6) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಪರೀಕ್ಷೆಯ ಪ್ರಮಾಣ ಪತ್ರ/ ವರ್ಗಾವಣಾ ಪ್ರಮಾಣ ಪತ್ರ / ಜನನ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ.
7) ಸೈನಿಕ ಸೇವೆಯಿಂದ ಬಿಡುಗಡೆಯಾದ / ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಮಾಜಿ ಸೈನಿಕ ಮೀಸಲಾತಿ ಕೋರಿದ್ದಲ್ಲಿ)
8) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, ಮತ್ತು 3ಬಿ ಮೀಸಲಾತಿ ಪ್ರಮಾಣ ಪತ್ರಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ (ಮೀಸಲಾತಿ ಕೋರಿದ್ದಲ್ಲಿ).
9) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ–1 ಮತ್ತು 2 ರಲ್ಲಿ (ಮೀಸಲಾತಿ ಕೋರಿದ್ದಲ್ಲಿ)
10) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
11) ಯೋಜನಾ ನಿರಾಶ್ರಿತ ಪ್ರಮಾಣ ಪತ್ರ (ಮೀಸಲಾತಿ ಕೋರಿದ್ದಲ್ಲಿ)
12) ಇಲಾಖಾ ಅಭ್ಯರ್ಥಿಗಳು ಸಂಬಂಧಪಟ್ಟ ನೇಮಕ ಪ್ರಾಧಿಕಾರಸ್ಥರಿಂದ ಸೇವೆ ಸಲ್ಲಿಸುತ್ತಿರುವ ಹಾಗೂ ಕಳೆದ 5 ವರ್ಷಗಳಲ್ಲಿ ಯಾವುದೇ ಶಿಕ್ಷೆಗೆ ಒಳಗಾಗಿಲ್ಲವೆಂಬ ಬಗ್ಗೆ ಪ್ರಮಾಣ ಪತ್ರವನ್ನು ಪಡೆದಿಟ್ಟುಕೊಂಡಿರಬೇಕು.

## XVI. ಇತರೆ ಸೂಚನೆಗಳು:

1) ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿದ ಅರ್ಜಿಯ ಡೌನ್‌ಲೋಡ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೇ ಇಟ್ಟುಕೊಂಡಿದ್ದು ಮೂಲದಾಖಲಾತಿಗಳ ಪರಿಶೀಲನೆಗೆ ಹಾಜರಾಗುವ ಸಮಯದಲ್ಲಿ ಸಲ್ಲಿಸುವುದು.
2) ಅಭ್ಯರ್ಥಿಗಳು ಸ್ಟೇಟ್ ಬ್ಯಾಂಕ್ ಆಫ್ ಮೈಸೂರಿನಲ್ಲಿ ಜಮಾ ಮಾಡಿರುವ ಅರ್ಜಿ ಶುಲ್ಕದ ಪ್ರತಿಯನ್ನು ತಮ್ಮಲ್ಲಿ ಇಟ್ಟುಕೊಳ್ಳುವುದು ಹಾಗೂ ಮೂಲ ದಾಖಲಾತಿಗಳ ಪರಿಶೀಲನಾ ಸಮಯದಲ್ಲಿ ಈ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
3) ನೈತಿಕ ದುರ್ನಡತೆಯಿಂದಾಗಿ / ನೀತಿಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ಈ ಸಂಸ್ಥೆಯಲ್ಲಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ / ಕೈಗಾರಿಕಾ / ವಾಣಿಜ್ಯಕ್ಕೆ ಸಂಬಂಧಪಟ್ಟ ಅಥವಾ ರಾಜ್ಯ ಸಾರಿಗೆ ಅಧೀನದಲ್ಲಿರುವ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ / ನೀತಿ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ / ನೀತ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗುತ್ತಾರೆ.
4) ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ.
5) ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
6) ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ಆನ್‌ಲೈನ್ ಮುಖಾಂತರ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಸೂಚನೆಗಳನ್ನು ತಪ್ಪದೇ ಗಮನಿಸತಕ್ಕದ್ದು.
7) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ಅವರು ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.
8) ಅಭ್ಯರ್ಥಿಗಳು ಪ.ಜಾತಿ / ಪ.ಪಂ. / ವರ್ಗ–1/IIಎ/IIಬಿ/IIIಎ/IIIಬಿ ಅಡಿಯಲ್ಲಿ ಹಾಗೂ ಇತರೆ ಗ್ರಾಮೀಣ / ಮಾಜಿ ಸೈನಿಕ/ ಕನ್ನಡ ಮಾಧ್ಯಮ **(horizontal reservation)** ಇತ್ಯಾದಿಗಳ ಮೀಸಲಾತಿಗಳನ್ನು ಕೋರುತ್ತಿದ್ದಲ್ಲಿ ಕರ್ನಾಟಕ ಸರ್ಕಾರವು ನಿಗಧಿಪಡಿಸಿರುವ ಅರ್ಹತೆಯನ್ನು (ಕ್ರೈಟೇರಿಯ) ಸರಿಯಾಗಿ ತಿಳಿದುಕೊಂಡು ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕದೊಳಗೆ ಪ್ರಮಾಣ ಪತ್ರಗಳನ್ನು ಹೊಂದಿರತಕ್ಕದ್ದು.
9) ಆಯ್ಕೆಗೊಂಡು ಸೇವೆಯಲ್ಲಿ ಖಾಯಂಗೊಳ್ಳುವ ಅಭ್ಯರ್ಥಿಗಳು ಉಪಧನ ಪಾವತಿ ಕಾಯ್ದೆ 1972 ರನ್ವಯ ಉಪಧನ ಪಡೆಯಲು ಅರ್ಹರು.
10) ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಆಯ್ಕೆಗೊಂಡ ಅಭ್ಯರ್ಥಿಗಳು ಕ.ರಾ.ರ.ಸಾ.ಸಂಸ್ಥೆ/ವಾ.ಕ.ರ.ಸಾ.ಸಂಸ್ಥೆ/ಈ.ಕ.ರ.ಸಾ.ಸಂಸ್ಥೆಗಳಿಗೆ ವರ್ಗಾವಣೆ ಕೋರಲು ಅರ್ಹರಲ್ಲ.
11) ಎಸ್.ಎಸ್.ಎಲ್.ಸಿ ಅಥವಾ ಮೇಲ್ದರ್ಜೆಯ ಪರೀಕ್ಷೆಯಲ್ಲಿ ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಕನ್ನಡವನ್ನು ಆಧ್ಯಯನ ಮಾಡದೆ ಇದ್ದಲ್ಲಿ ಅಯ್ಕೆಗೊಂಡ ಅಭ್ಯರ್ಥಿಗಳು ಸಂಸ್ಥೆಯವತಿಯಿಂದ ನಡೆಸುವ ಕನ್ನಡ ಭಾಷಾ ಜ್ಞಾನದ ಪರೀಕ್ಷೆಯಲ್ಲಿ ಒಂದೇ ಅವಕಾಶದಲ್ಲಿ ಉತ್ತೀರ್ಣರಾಗಬೇಕು ಇಲ್ಲದಿದ್ದಲ್ಲಿ ಅವರ ಆಯ್ಕೆಯನ್ನು ರದ್ದುಗೊಳಿಸಲಾಗುವುದು.
12) ಸುಳ್ಳು ಮಾಹಿತಿ ಅಥವಾ ನಕಲಿ ಪ್ರಮಾಣ ಪತ್ರ : ದಾಖಲಾತಿಗಳನ್ನು ಸಲ್ಲಿಸಿ ನೌಕರಿ ಪಡೆದಿರುವುದು ಯಾವುದೇ ಸಂದರ್ಭದಲ್ಲಿ ಕಂಡುಬಂದಲ್ಲಿ ಅವರನ್ನು ಯಾವುದೇ ಮುನ್ಸೂಚನೆ ನೀಡದೇ ನೌಕರಿಯಿಂದ ವಜಾ ಮಾಡುವುದರ ಜೊತೆಗೆ ಅವರ ವಿರುದ್ದ ಕಾನೂನು ರೀತಿಯ ಕ್ರಮ ತೆಗೆದುಕೊಳ್ಳಲಾಗುವುದು.
13) ಅಭ್ಯರ್ಥಿಗಳ ಅರ್ಹತೆಯ ವಿಷಯದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ನಿರ್ಧಾರವೇ ಅಂತಿಮವಾಗಿರುತ್ತದೆ.
14) ಅಂಗವಿಕಲ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಲ್ಲ.

15) ಹಿಂದಿ ಮಟ್ಟದಲ್ಲಿ ಮಾತ್ರ ವ್ಯಾಸಂಗ ಮಾಡಿದ ಅಭ್ಯರ್ಥಿಗಳನ್ನು ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ತತ್ಸಮಾನವೆಂದು ಪರಿಗಣಿಸಲಾಗುವುದಿಲ್ಲ.

16) ಅಭ್ಯರ್ಥಿಯು ಯಾವುದೇ ವಿಧವಾದ ಪ್ರಚಾರ ಮಾಡುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಅವರನ್ನು ಯಾವ ಮುನ್ಸೂಚನೆ ನೀಡದೇ ಅವರನ್ನು ಅನರ್ಹಗೊಳಿಸಲಾಗುವುದು.

17) ನೇಮಕಾತಿಯ ವಿವಿಧ ಹಂತಕ್ಕೆ ಸಂಬಂಧಪಟ್ಟ ಎಲ್ಲಾ ವಿವರಗಳನ್ನು ಸಂಸ್ಥೆಯ ವೆಬ್‌ಸೈಟ್ www.bmtccareers.com ನಲ್ಲಿ ಪಡೆಯಬಹುದಾಗಿರುತ್ತದೆ. ಆದ್ದರಿಂದ, ನೇಮಕಾತಿ ಪ್ರಕ್ರಿಯೆಗಳ ಬಗ್ಗೆ ಅಭ್ಯರ್ಥಿಗಳು ಯಾವುದೇ ರೀತಿಯ ಪತ್ರ ವ್ಯವಹಾರ ಅಥವಾ ವಿಚಾರಣೆಗಳಿಗೆ ಅಸ್ಪದವಿರುವುದಿಲ್ಲ.

**18) ನಿರ್ವಾಹಕ ಹುದ್ದೆಗೆ ಅಭ್ಯರ್ಥಿಗಳ ಆಯ್ಕೆಯನ್ನು ನಿಗಧಿಪಡಿಸಿರುವ ವಿದ್ಯಾರ್ಹತೆಯ ಶೇಕಡವಾರು ಅಂಕಗಳ ಆಧಾರದ ಮೇಲೆ ಹಾಗೂ ಚಾಲಕ ಹುದ್ದೆಗೆ ಗಣಕೀಕೃತ ಚಾಲನಾ ವೃತ್ತಿ ಪಥದಲ್ಲಿ ನಡೆಸುವ ಚಾಲನಾ ವೃತ್ತಿ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಮಾಡುವುದರಿಂದ ಅಭ್ಯರ್ಥಿಗಳು ಯಾವುದೇ ಆಮಿಷಕ್ಕೆ ಒಳಗಾಗಬಾರದು.**

**ವ್ಯವಸ್ಥಾಪಕ ನಿರ್ದೇಶಕರು.**